## ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆಃ 774 /2021

**ಸಾಕ್ಷಿಯನ್ನು ದಿಃ 15.05.2026 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | |
|---|---|---|
| ಹೆಸರು | ಶಂಕರ್ | ಡಿ.ಡಬ್ಲ್ಯೂಃ 1 |
| ತಂದೆಯ ಹೆಸರು | ವೆಂಕಟೇಗೌಡ | |
| ವಯಸ್ಸು | 45 ವರ್ಷ | |
| ಕೆಲಸ | ಫಾಸ್ಟ್ ಫುಡ್ ಅಂಗಡಿ ಮತ್ತು ವ್ಯವಸಾಯ | |
| ವಾಸಸ್ಥಳ | ಮೈಸೂರು. | |

## ಮುಖ್ಯ ವಿಚಾರಣೆಃ ಆರೋಪಿ ಪರ ಶ್ರೀ. NN ಪರ ಶ್ರೀ. SS ವಕೀಲರಿಂದ

ರೇಣುಕಾ ಎನ್ನುವವರು ಯಾರೆಂದು ನನಗೆ ಗೊತ್ತಿಲ್ಲ. ಕುಶಾಲ್ ಮತ್ತು ನನ್ನ ಮಧ್ಯೆ ವ್ಯವಹಾರ ಇತ್ತು. ಅವರು ನನ್ನಿಂದ ಎರಡು ಚೆಕ್ಕುಗಳನ್ನು ತೆಗೆದುಕೊಂಡಿದ್ದರು, ಸದರಿ ಕುಶಾಲ್ ನನ್ನಚೆಕ್ಕುಗಳನ್ನು ದುರುಪಯೋಗಪಡಿಸಿಕೊಂಡು ಅವರ ಅಕ್ಕನ ಮೂಲಕ ಈ ಸುಳ್ಳು ಕೇಸನ್ನು ನನ್ನ ವಿರುದ್ಧ ದಾಖಲಿಸಿದ್ದಾರೆ. ನನಗೆ ವಕೀಲರಿಂದ ಯಾವುದೇ ನೋಟೀಸ್ ಬಂದಿಲ್ಲ. ಪೋಲಿಸರು ನನಗೆ ಫೋನ್ ಮಾಡಿ ತಿಳಿಸಿದಾಗ ಗೊತ್ತಾಯಿತು. ನಂತರ ನ್ಯಾಯಾಲಯಕ್ಕೆ ಬಂದಾಗ ರೇಣುಕಾ ಕೇಸು ಹಾಕಿದ್ದಾರೆ ಎಂದು ಗೊತ್ತಾಯಿತು.

(**ಮುಂದುವರಿದ ಮುಖ್ಯ ವಿಚಾರಣೆಗಾಗಿ ಕಾಲಾವಕಾಶ ಕೋರಿದ್ದು, ಸೂಕ್ತ ಕಾರಣಗಳನ್ನು ನೀಡದೇ ಇರುವುದರಿಂದ ಕೋರಿಕೆಯನ್ನು ತಳ್ಳಿ ಹಾಕಿ ಮುಂದುವರಿದ ಮುಖ್ಯ ವಿಚಾರಣೆ ಇಲ್ಲ ಎಂದು ತೆಗೆದುಕೊಳ್ಳಲಾಯಿತು**.)

ಪಾಟೀ ಸವಾಲುಃ ಫಿರ್ಯಾದುದಾರರ ಪರ ಶ್ರೀ ಎಸ್ ಎನ್ ವಕೀಲರಿಂದಃ-

ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆ ಮೇರೆಗೆ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಅನಿತ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.